ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಎಂಡಿ/ಎಂಎಸ್ ವೈದ್ಯಕೀಯ ಸೀಟುಗಳಲ್ಲಿನ ಅವ್ಯವಹಾರದ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

468 (415) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನಲ್ಲಿ ಖಾಸಗಿ ವೈದ್ಯಕೀಯ ಕಾಲೇಜುಗಳು ಸರ್ಕಾರಕ್ಕೆ ಎಂ.ಎ.ಎಂ.ಎಸ್ ಸ್ನಾತಕೋತ್ತರ ವೈದ್ಯಕೀಯ ವಿಭಾಗದ 429 ಸೀಟುಗಳನ್ನು ಬಿಟ್ಟುಕೊಟ್ಟಿದ್ದು, ಸರ್ಕಾರವು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗೆ 576 ಸೀಟುಗಳನ್ನು ಬಿಟ್ಟು ಕೊಟ್ಟಿರುವುದಕ್ಕೆ ಯಾವ ಒಡಂಬಡಿಕೆ ಕಾರಣವಾಗಿದೆ ;

(ಆ) 2019-20ನೇ ಸಾಲಿನಲ್ಲಿ ಸ್ನಾತಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆ.ಇ.ಎ. ವತಿಯಿಂದ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕಾಗಿ ಪ್ರವೇಶಾವಕಾಶ ದೊರೆಯಲಿಲ್ಲ ; ಇದರಲ್ಲಿ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) 2018-19 ನೇ ಸಾಲಿನಲ್ಲಿ ಸ್ನಾತಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆ.ಇ.ಎ. ವತಿಯಿಂದ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಎಷ್ಟು ; ವಿದ್ಯಾರ್ಥಿಗಳಿಗೆ ವೈದ್ಯಕೀಯ ಪ್ರವೇಶಾವಕಾಶ ದೊರೆತಿದೆ ?